ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1247(1405)
ಸದಸ್ಯರ ಹೆಸರು	:	ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ)
ಉತ್ತರಿಸುವ ಸಚಿವರು	:	ಶ್ರೀ ಗೋವಿಂದ.ಎಂ.ಕಾರಜೋಳ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು.)

ಅ) ಮಲೆನಾಡಿನಲ್ಲಿ ನಿರಂತರ ವಿದ್ಯುತ್ ಸರಬರಾಜು ಇಲ್ಲದಿರುವುದರಿಂದ ದೀಪಕ್ಕಾಗಿ ಸೀಮೆಎಣ್ಣೆಯನ್ನು ಹೆಚ್ಚಾಗಿ ಉಪಯೋಗಿಸುತ್ತಿರುವುದರಿಂದ ಗ್ಯಾಸ್ ಸಂಪರ್ಕ ಹೊಂದಿರುವ ಫಲಾನುಭವಿಗಳಿಗೆ ಸೀಮೆಎಣ್ಣೆ ಸರಬರಾಜು ರದ್ದುಮಾಡಿರುವ ಕಾರಣ ಸಾರ್ವಜನಿಕರಿಗೆ ತೀವ್ರತರ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಅನಿಲ ಸಂಪರ್ಕ ಹೊಂದಿದ ಪಡಿತರ ಚೀಟಿದಾರರಿಗೆ ಸಾರ್ವಜನಿಕ ವಿತರಣಾ ಪದ್ಧತಿಯಡಿಯ ಸೀಮೆಎಣ್ಣೆ ನೀಡುತ್ತಿರುವುದಿಲ್ಲ.

ಆ) ಗ್ಯಾಸ್ ಸಂಪರ್ಕ ಹೊಂದಿರುವವರಿಗೆ ದೀಪಕ್ಕಾಗಿ ಕನಿಷ್ಟ ಪ್ರಮಾಣದ ಸೀಮೆಎಣ್ಣೆಯನ್ನು ವಿತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಕೇಂದ್ರ ಸರ್ಕಾರದಿಂದ ಸಾರ್ವಜನಿಕ ವಿತರಣಾ ಪದ್ಧತಿಯಡಿ ಅನಿಲ ರಹಿತ ಪಡಿತರ ಚೀಟಿದಾರರಿಗೆ ಮಾತ್ರ ವಿತರಿಸಲು ಸೀಮೆಎಣ್ಣೆ ಹಂಚಿಕೆ ನೀಡಲಾಗುತ್ತಿದೆ. ಅದರಂತೆ ರಾಜ್ಯಾದ್ಯಂತ ಏಕರೂಪ ಪ್ರಮಾಣದಲ್ಲಿ ಸೀಮೆಎಣ್ಣೆ ಹಂಚಿಕೆ ನೀಡಿ, ಪಟ್ಟಣ, ನಗರ, ಗ್ರಾಮಾಂತರ ಪ್ರದೇಶಗಳ ಅನಿಲ ರಹಿತ ಪಡಿತರ ಚೀಟಿದಾರರಿಗೆ ಮಾತ್ರ ಸೀಮೆಎಣ್ಣೆ ವಿತರಿಸುವ ಕ್ರಮ ಅನುಸರಿಸಲಾಗುತ್ತಿರುವುದರಿಂದ ಮಲೇನಾಡು ಜಿಲ್ಲೆಗಳಿಗೆ ಪ್ರತ್ಯೇಕವಾಗಿ ಹೆಚ್ಚು ಸೀಮೆಎಣ್ಣೆಯನ್ನು ನೀಡಲು ಸಾಧ್ಯವಾಗುವುದಿಲ್ಲ. ಕೇಂದ್ರದ

ಹಂಚಿಕೆ ಕಡಿಮೆ ಇರುವುದರಿಂದ ರಾಜ್ಯಾದ್ಯಂತ ಏಕರೂಪದಲ್ಲಿ ಸೀಮೆಎಣ್ಣೆ ವಿತರಣೆ ಮಾಡುತ್ತಿರುವುದರಿಂದ ಹೆಚ್ಚಿಗೆ ಸೀಮೆಎಣ್ಣೆ